# ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ

ಪರೀಕ್ಷಾ ವಿಭಾಗ

“ಜ್ಞಾನ ಗಂಗಾ” ಕಲಬುರಗಿ-೫೮೫ ೧೦೬, ಕರ್ನಾಟಕ, ಭಾರತ.

ದೂರವಾಣಿ ಸಂಖ್ಯೆ: ೦೮೪೭೨-೨೬೩೨೦೩ ಫ್ಯಾಕ್ಸ್ : ೦೮೪೭೨-೨೬೩೨೦೭

ಇ-ಮೇಲ್: regegug@rediffmail.com


ಸಂಖ್ಯೆ: ಗುವಿಕ: ಪರೀಕ್ಷಾ/ಸಿ1(14)/2020-21/747 ದಿನಾಂಕ: 28.07.2020 29

## ಪರಿಷ್ಕೃತ ಅಧಿಸೂಚನೆ-II

**ವಿಷಯ: ಅಗಷ್ಟ/ಸೆಪ್ಟಂಬರ್-2020 ರಲ್ಲಿ ಜರುಗಲಿರುವ ಆರನೇ ಸೆಮಿಸ್ಟರ್ ಸ್ನಾತಕ ಕೋರ್ಸುಗಳ ಪರೀಕ್ಷೆಗಳ ಬಗ್ಗೆ.**

**ಉಲ್ಲೇಖ:1. No. GUK/ACA/Cale-UG/2019-20/204 Dated: 25.07.2019**

**2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 28.07.2020**

***

ಅಗಷ್ಟ/ಸೆಪ್ಟಂಬರ್-2020ರಲ್ಲಿ ಜರುಗಲಿರುವ ಬಿ.ಎ, ಬಿ.ಎಸ್ಸಿ, ಬಿ.ಕಾಂ, ಬಿಬಿಎಂ, ಬಿಸಿಎ, ಬಿವಿಎ, ಬಿಎಫ್ಎ ಹಾಗೂ ಬಿ.ಎಸ್.ಡಬ್ಲೂ ಆರನೇ ಸೆಮಿಸ್ಟರ್ ಪರೀಕ್ಷೆಗಳ ಪರೀಕ್ಷಾ ಶುಲ್ಕ ಅರ್ಜಿಗಳನ್ನು ಸ್ವೀಕರಿಸುವ ಕೊನೆಯ ದಿನಾಂಕ ಹಾಗೂ ಪರೀಕ್ಷೆಗಳು ಪ್ರಾರಂಭವಾಗುವ ವಿವರಗಳನ್ನು ಈ ಕೆಳಗಿನಂತೆ ನಮೂದಿಸಲಾಗಿದೆ.

**ಭಾಗ-1**

| ಕ್ರಸಂ | ವಿವರಗಳು | BA / B.COM / BSW | BSC / BCA / BBM/BVA/BFA |
|---|---|---|---|
| 1 | ಪರೀಕ್ಷಾ ಶುಲ್ಕ(Without Practical) | ರೂ. 1100/- | ರೂ. 1210/- |
| 2 | ಪರೀಕ್ಷಾ ಶುಲ್ಕ(With Practical) | ರೂ. 1210/- | ರೂ. 1210/- |
| 3 | ಅಂಕಪಟ್ಟಿ ಶುಲ್ಕ | ರೂ. 150/- | |
| 4 | ಅರ್ಜಿ ತಪಾಸಣೆ ಶುಲ್ಕ | ರೂ. 16/- | |
| 5 | ಪಿಪಿಸಿ ಶುಲ್ಕ(For VI Sem. only) | ರೂ. 150/- | |
| 6 | ಅರ್ಜಿಗಳ ಸಂಸ್ಕರಣ ಶುಲ್ಕ | ರೂ. 100/- | |

**ಭಾಗ-2**

| ಕ್ರಸಂ | ವಿವರಗಳು | ದಿನಾಂಕ |
|---|---|---|
| 1 | ಪ್ರಾಯೋಗಿಕ ಪರೀಕ್ಷೆಗಳು ಪ್ರಾರಂಭವಾಗುವ ದಿನಾಂಕ | -- |
| 2 | ವಿದ್ಯಾರ್ಥಿಗಳು ಕಾಲೇಜಿನಲ್ಲಿ ಪರೀಕ್ಷಾ ಶುಲ್ಕದೊಂದಿಗೆ ಅರ್ಜಿ ಸಲ್ಲಿಸುವ ಕಡೆಯ ದಿನಾಂಕ **(ದಂಡರಹಿತ)** | 05.08.2020 |
| 3 | ವಿದ್ಯಾರ್ಥಿಗಳು ಕಾಲೇಜಿನಲ್ಲಿ ಪರೀಕ್ಷಾ ಶುಲ್ಕದೊಂದಿಗೆ ಅರ್ಜಿ ಸಲ್ಲಿಸುವ ಕಡೆಯ ದಿನಾಂಕ **(ದಂಡ ಸಹಿತ ರೂ. 100/-)** | 06.08.2020 |
| 4 | ವಿದ್ಯಾರ್ಥಿಗಳು ಕಾಲೇಜಿನಲ್ಲಿ ಪರೀಕ್ಷಾ ಶುಲ್ಕದೊಂದಿಗೆ ಅರ್ಜಿ ಸಲ್ಲಿಸುವ ಕಡೆಯ ದಿನಾಂಕ **(ದಂಡ ಸಹಿತ ರೂ. 750/-)** | 07.08.2020 |
| 5 | ಪ್ರಾಂಶುಪಾಲರುಗಳು ಪರೀಕ್ಷಾ ಶುಲ್ಕ, ದಂಡ ಶುಲ್ಕದೊಂದಿಗೆ ಅಭ್ಯರ್ಥಿಗಳ ಪರೀಕ್ಷಾ ಅರ್ಜಿಗಳ ಮಾಹಿತಿಯನ್ನು OASIS (Online College Portal) ನಲ್ಲಿ ಸಲ್ಲಿಸುವ ದಿನಾಂಕ | 10.08.2020 |
| 6 | ಪ್ರಾಂಶುಪಾಲರುಗಳು ಪರೀಕ್ಷಾ ಶುಲ್ಕ, ದಂಡ ಶುಲ್ಕದೊಂದಿಗೆ ವಿದ್ಯಾರ್ಥಿಗಳ ಪರೀಕ್ಷಾ ಅರ್ಜಿಗಳ ಮಾಹಿತಿಯನ್ನು ವಿಶ್ವವಿದ್ಯಾಲಯಕ್ಕೆ ಸಲ್ಲಿಸುವ ದಿನಾಂಕ (Submission of OASIS candidate list, Fee Challan & Documents related to fee exemption) | 12.08.2020 |
| 7 | ಪರೀಕ್ಷಾ ಪ್ರವೇಶ ಪತ್ರಗಳನ್ನು(Hall Ticket) OASIS ಮೂಲಕ ಪಡೆಯುವ ದಿನಾಂಕ | 13.08.2020 |
| 8 | ಆಂತರಿಕ ಅಂಕಗಳನ್ನು OASIS ಮೂಲಕ ಸಲ್ಲಿಸುವುದು | 10.08.2020 |
| 9 | ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ದಿನಾಂಕ | 17.08.2020 |

**ಸೂಚನೆಗಳು**

1. ಏಪ್ರೀಲ್, 2020ರ ಪರೀಕ್ಷಾ ಅರ್ಜಿಗಳನ್ನು ಆನಲೈನ್ ಮೂಲಕ ಪಡೆಯಬಹುದಾಗಿದ್ದು, ಪ್ರತಿ ಅರ್ಜಿಗೆ ರೂ.**100/-** ಗಳನ್ನು ಸಂಸ್ಕರಣ ಶುಲ್ಕವೆಂದು ಪಾವತಿಸುವುದು ಹಾಗೂ ಸದರಿ ಚಲನ್‌ಗಳನ್ನು OASIS **ವಿದ್ಯಾರ್ಥಿಗಳ ಪಟ್ಟಿಯೊಂದಿಗೆ ಪರೀಕ್ಷಾ ವಿಭಾಗಕ್ಕೆ ಸಲ್ಲಿಸಬೇಕು. ಯಾವುದೇ ಕಾರಣಕ್ಕೂ ಪರೀಕ್ಷಾ ವಿಭಾಗದಿಂದ ಮ್ಯಾನುವೆಲ್ ಪರೀಕ್ಷಾ ಅರ್ಜಿಗಳನ್ನು** ನೀಡುವುದಿಲ್ಲ. ರಿಪೀಟರ್ ವಿದ್ಯಾರ್ಥಿಗಳ ಪರೀಕ್ಷಾ ಅರ್ಜಿಗಳಿಗೆ ಸಹ ರೂ.100/-ಗಳನ್ನು ಸಂಸ್ಕರಣ ಶುಲ್ಕವೆಂದು ಪಾವತಿಸಿ, **ಆನಲೈನ್ ಮೂಲಕ ಮಾತ್ರ ಪರೀಕ್ಷಾ ಅರ್ಜಿಗಳನ್ನು ಪಡೆಯಬಹುದು.**
2. ವಿದ್ಯಾರ್ಥಿಗಳು / ಪ್ರಾಂಶುಪಾಲರುಗಳು Post Office, Razar Pay and PayTm **ಭರಿಸಿದ ಶುಲ್ಕದ ರಿಸಿದಿಯೊಂದಿಗೆ / ಚಲನ್‌ದೊಂದಿಗೆ ಪರೀಕ್ಷಾ ಅರ್ಜಿಗಳ ಮಾಹಿತಿ** (OASIS **ವಿದ್ಯಾರ್ಥಿಗಳ ಪಟ್ಟಿ) ಯನ್ನು ಪರೀಕ್ಷಾವಿಭಾಗಕ್ಕೆ 12.08.2020 ರೊಳಗಾಗಿ ಸಲ್ಲಿಸತಕ್ಕದು. ತಪ್ಪಿದಲ್ಲಿ ಪ್ರತಿ ದಿವಸ ರೂ.500/- ದಂಡ ವಿಧಿಸಲಾಗುವುದು.**
3. **ಬಿ.ಬಿ.ಎಂ/ಬಿ.ಸಿ.ಎ ಅಭ್ಯರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಭರಿಸಬೇಕು.**
4. ಬಿ.ಎ./ಬಿ.ಎಸ್ಸಿ./ಬಿ.ಕಾಂ/ಬಿಬಿಎಂ/.ಬಿಸಿಎ/.ಬಿಎಸ್.ಡಬ್ಲ್ಯೂ ಸೆಮಿಸ್ಟರ್ ಪರೀಕ್ಷೆಗಳಿಗೆ ಹಾಜರಾಗುವ ವಿಷಯವಾರು ಅಭ್ಯರ್ಥಿಗಳ ಸಂಖ್ಯೆ ತೋರಿಸುವ ಪಟ್ಟಿಯನ್ನು ಲಗತ್ತಿಸಬೇಕು.
5. ಪರೀಕ್ಷಾ ಕೇಂದ್ರದ ಬದಲಾವಣೆಗೆ ಯಾವುದೇ ಕಾರಣಕ್ಕೂ ಅವಕಾಶವಿರುವದಿಲ್ಲ.
6. ಅಂಕಪಟ್ಟಿಗಳ ಪ್ರತಿಗಳನ್ನು ಆಯಾ ಮಹಾವಿದ್ಯಾಲಯದ ಪ್ರಾಂಶುಪಾಲರೇ ದೃಢೀಕರಿಸಬೇಕು. ವಿನಾಯತಿ (Exemption) ಪಡೆದ ಬಗ್ಗೆ ಹಾಗೂ ಹಿಂದಿನ ಪರೀಕ್ಷೆಯ ಪಾಸಾದ ಬಗ್ಗೆ ದೃಡೀಕರಿಸಲ್ಪಟ್ಟ ಝರಾಕ್ಸ ಪ್ರತಿಗಳನ್ನು ಲಗತ್ತಿಸಬೇಕು.
7. ಪ್ರಾಂಶುಪಾಲರುಗಳು ವಿಶ್ವವಿದ್ಯಾಲಯಕ್ಕೆ ಪರೀಕ್ಷಾ ಅರ್ಜಿಗಳ ಮಾಹಿತಿಯನ್ನು(OASIS **ವಿದ್ಯಾರ್ಥಿಗಳ ಪಟ್ಟಿ**) ಕಳುಹಿಸುವ ಮೊದಲು ಅವುಗಳನ್ನು ಚೆನ್ನಾಗಿ ಪರಿಶೀಲಿಸಬೇಕು.
8. **ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಪ್ರವರ್ಗ -1, ಪ್ರವರ್ಗ-2 (ಎ),ಪ್ರವರ್ಗ-2 (ಬಿ), ಪ್ರವರ್ಗ-3 (ಎ), ಪ್ರವರ್ಗ-3 (ಬಿ) ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳು, ಸರ್ಕಾರ ನಿಗದಿಪಡಿಸಿದ ಆದಾಯದ ಮಿತಿಯೊಳಗೆ ಇದ್ದಲ್ಲಿ & ಶಿಷ್ಯವೇತನಕ್ಕೆ ಅರ್ಜಿ ಸಲ್ಲಿಸಿದ್ದಲ್ಲಿ ಮಾತ್ರ ಪರೀಕ್ಷಾ ಶುಲ್ಕ ಪಾವತಿಯಿಂದ ವಿನಾಯಿತಿ ಪಡೆಯಬಹುದು.**
9. ಪರೀಕ್ಷಾ ಶುಲ್ಕ ಪಾವತಿಯಿಂದ ವಿನಾಯಿತಿ ಪಡೆಯುವ ಪಂಗಡಗಳಿಗೆ ಸಂಬಂಧಿಸಿದ ವಿದ್ಯಾರ್ಥಿಗಳು ಪರೀಕ್ಷಾ ಅರ್ಜಿ ಸಂಸ್ಕರಣಾ ಶುಲ್ಕ, ಅಂಕಪಟ್ಟಿ ಶುಲ್ಕ, ಸ್ಕೂಟನಿ ಶುಲ್ಕ & ಪಿ.ಪಿ.ಸಿ. ಶುಲ್ಕ ಪಾವತಿ ಮಾಡಬೇಕಾಗುತ್ತದೆ.
10. ಪ್ರಾಂಶುಪಾಲರುಗಳು ಪರೀಕ್ಷಾ ಶುಲ್ಕ ಪಾವತಿಯಿಂದ ವಿನಾಯಿತಿ ಪಡೆಯುವ ವಿದ್ಯಾರ್ಥಿಗಳ ಶಿಷ್ಯವೇತನ ಅರ್ಜಿಗಳನ್ನು ಕಡ್ಡಾಯವಾಗಿ ಸಂಬಂಧಪಟ್ಟ ಇಲಾಖೆಗಳಿಗೆ ಸಲ್ಲಿಸುವ ವ್ಯವಸ್ಥೆ ಮಾಡುವದು. ಪ್ರಾಂಶುಪಾಲರುಗಳು **ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಸಮಾಜ ಕಲ್ಯಾಣ ಇಲಾಖೆಯಿಂದ / ಹಿಂದುಳಿದ ವರ್ಗ & ಅಲ್ಪ ಸಂಖ್ಯಾತ ಇಲಾಖೆಯಿಂದ ಪಡೆದು, ಒಂದು ವೇಳೆ ಹಿಂದಿನ ವರ್ಷಗಳ ಪರೀಕ್ಷಾ ವಿನಾಯಿತಿ ಶುಲ್ಕ ಬಾಕಿ ಇದ್ದಲ್ಲಿ ಅದನ್ನು ಸೇರಿಸಿ, ವಿಶ್ವವಿದ್ಯಾಲಯಕ್ಕೆ ಸಂದಾಯ ಮಾಡುವ ಜವಾಬ್ದಾರಿ ಆಯಾ ಮಹಾವಿದ್ಯಾಲಯದ ಪ್ರಾಂಶುಪಾಲರ ಹೊಣೆಯಾಗಿರುವದು.** ಒಂದು ವೇಳೆ ಸಂದಾಯ ಮಾಡದಿದ್ದಲ್ಲಿ ಇದನ್ನು ಆಯಾ ಕಾಲೇಜಿನ ಪ್ರಾಂಶುಪಾಲರಿಂದ ಭರಿಸಿಕೊಳ್ಳಲಾಗುವದು.
11. ಶುಲ್ಕ ವಿನಾಯಿತಿ ಪಡೆದ ವಿದ್ಯಾರ್ಥಿಗಳ ವಿವರದ ಪಟ್ಟಿಯ ಒಂದು ಪ್ರತಿಯನ್ನು ಹಣಕಾಸು ಅಧಿಕಾರಿಗಳು, ಗುಲಬರ್ಗಾ ವಿಶ್ವವಿದ್ಯಾಲಯ ಕಲಬುರಗಿ ಇವರಿಗೆ ಹಾಗೂ ಮತ್ತೊಂದು ಪ್ರತಿಯನ್ನು ಪರೀಕ್ಷಾ ವಿಭಾಗಕ್ಕೆ ಸಲ್ಲಿಸಬೇಕು. ಶುಲ್ಕ ವಿನಾಯಿತಿ ಪಡೆಯುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಜಾತಿ ಪ್ರಮಾಣ ಪತ್ರವನ್ನು ಆಯಾ ತಹಶೀಲ್ದಾರರಿಂದ ಪಡೆದು ಪರೀಕ್ಷಾ ಅರ್ಜಿಯ ಮಾಹಿತಿಯ ಪಟ್ಟಿ ಜೊತೆಗೆ ಲಗತ್ತಿಸತಕ್ಕದ್ದು.
12. ರಿಪೀಟರ್ ವಿದ್ಯಾರ್ಥಿಗಳಿಗೆ ಯಾವುದೇ ಪರೀಕ್ಷಾ ಶುಲ್ಕದ ವಿನಾಯಿತಿ ಇರುವುದಿಲ್ಲ. ಅವರು ನಿಗದಿಪಡಿಸಿದ ಶುಲ್ಕವನ್ನು ಪಾವತಿಸಬೇಕು. ಬಿ.ಎ/ಬಿ.ಎಸ್ಸಿ/ಬಿ.ಕಾಂ/ಬಿ.ಎಸ್.ಡಬ್ಲ್ಯೂ/ಬಿವಿಎ ಭಾಗಶಃ ಪರೀಕ್ಷೆ ತೆಗೆದುಕೊಳ್ಳುವ ಅಭ್ಯರ್ಥಿಗಳು ಪ್ರತಿ ಪತ್ರಿಕೆಗೆ ಶುಲ್ಕ ರೂ. **250**/-, ಎರಡು ಪತ್ರಿಕೆಗಳಿಗೆ ರೂ.**500**/- ಹಾಗೂ ಎರಡಕ್ಕಿಂತ ಹೆಚ್ಚಿನ ಪತ್ರಿಕೆಗಳಿಗೆ ಪೂರ್ಣ ಶುಲ್ಕ ಪಾವತಿಸಬೇಕು.

13. ಒಮ್ಮೆ ಪಾವತಿಸಲಾದ ಪರೀಕ್ಷಾ ಶುಲ್ಕವನ್ನು ಯಾವ ಕಾರಣಕ್ಕೂ ಮರುಪಾವತಿ ಮಾಡಲಾಗುವುದಿಲ್ಲ ಹಾಗೂ ಅದನ್ನು ಮುಂದಿನ ಪರೀಕ್ಷೆಗಳಿಗೆ ಸರಿದೂಗಿಸಿಕೊಳ್ಳಲಾಗುವುದಿಲ್ಲ ಮತ್ತು ಇಂತಹ ವಿಷಯಗಳಿಗೆ ಪತ್ರ ವ್ಯವಹಾರಕ್ಕೆ ಅಸ್ಪದವಿರುವುದಿಲ್ಲ.
14. ಯಾವುದೇ ಪರಿಸ್ಥಿತಿಯಲ್ಲಿ ಅಧಿಸೂಚನೆಯಲ್ಲಿ ನಿಗದಿಪಡಿಸಿ ತಿಳಿಸಿದ ಕೊನೆಯ ದಿನಾಂಕ ಮುಗಿದ ನಂತರ ಬಂದಂತಹ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಮತ್ತು ಯಾವುದೇ ಕಾರಣಕ್ಕಾಗಿ ಪರೀಕ್ಷೆಗಳು ಮುಂದೂಡಿದಲ್ಲಿ ಶುಲ್ಕ ಪಾವತಿಸುವ ದಿನಾಂಕಗಳು ಬದಲಾವಣೆಯಾಗುವುದಿಲ್ಲ.
15. ಪ್ರಾಂಶುಪಾಲರುಗಳು ಅಭ್ಯರ್ಥಿಗಳಿಂದ ಸ್ವೀಕರಿಸಿದ ಅರ್ಜಿ ಪರಿಶೀಲನಾ ಶುಲ್ಕ ರೂ. **16**ರಲ್ಲಿ, ರೂ.**8**/–ನ್ನು ಮಾತ್ರ ಪರೀಕ್ಷಾ ಶುಲ್ಕದ ಜೊತೆಗೆ ವಿಶ್ವವಿದ್ಯಾಲಯಕ್ಕೆ ಪಾವತಿಸುವುದು.
16. ಅಭ್ಯರ್ಥಿಗಳು ಪರೀಕ್ಷೆಯಲ್ಲಿ ತಮ್ಮ ಉತ್ತರಗಳನ್ನು ಕೇವಲ ಇಂಗ್ಲೀಷ ಇಲ್ಲವೆ ಕನ್ನಡ ಮಾಧ್ಯಮದಲ್ಲಿ ಮಾತ್ರ ಬರೆಯಲು ಅವಕಾಶವಿದೆ. ಉಳಿದ ಭಾಷೆಗಳಲ್ಲಿ ಬರೆಯತಕ್ಕದ್ದಲ್ಲ ಎಂಬುದನ್ನು ಪ್ರಾಂಶುಪಾಲರು ಅಭ್ಯರ್ಥಿಗಳ ಗಮನಕ್ಕೆ ತರಬೇಕು. ವಿದ್ಯಾರ್ಥಿಗಳು ಇಂಗ್ಲೀಷ ಇಲ್ಲವೆ ಕನ್ನಡ ಮಾಧ್ಯಮದಲ್ಲಿ ಬರೆಯದೇ ಬೇರೆ ಮಾಧ್ಯಮದಲ್ಲಿ ಬರೆದರೆ ಅಂತಹ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳು ಮೌಲ್ಯಮಾಪನವಾಗದೇ ಉಳಿಯುತ್ತವೆ. ಅಂಥಹ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶವನ್ನು ಅನೂರ್ಜಿತಗೊಳಿಸಲಾಗುವುದೆಂದು ಅಭ್ಯರ್ಥಿಗಳಿಗೆ ಮನವರಿಕೆ ಮಾಡಿಕೊಡಬೇಕು. **ಇದು ಭಾಷಾ ವಿಷಯಗಳಿಗೆ ಅನ್ವಯವಾಗುವುದಿಲ್ಲ.**
17. ಪ್ರಾಂಶುಪಾಲರು ತಮ್ಮ ಕಚೇರಿಯ ಸಿಬ್ಬಂದಿಗಳಿಗೆ ಈ ಅಧಿಸೂಚನೆಯಲ್ಲಿ ತಿಳಿಸಿದ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳುವ ಹೊಣೆಗಾರಿಕೆ ಅವರದ್ದಾಗಿದೆ ಎಂಬುದು ಮನವರಿಕೆ ಮಾಡಿಕೊಡಲು ಸೂಚಿಸಲಾಗಿದೆ.

29/07

ಕುಲಸಚಿವರು (ಮೌಲ್ಯಮಾಪನ)
ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ.

ಗೆ,

ಗುಲಬರ್ಗಾ ವಿಶ್ವವಿದ್ಯಾಲಯ ವ್ಯಾಪ್ತಿಯ ಎಲ್ಲಾ ಪದವಿ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.

ಪ್ರತಿಗಳು:

1. ವಿತ್ತಾಧಿಕಾರಿಗಳು, ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ.
2. ಸರಕಾರಿ ಲೆಕ್ಕ ಪರಿಶೋಧಕರು, ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ.
3. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು / ಕುಲಸಚಿವರು / ಕುಲಸಚಿವರು(ಮೌಲ್ಯಮಾಪನ) ಅವರ ಆಪ್ತ ಸಹಾಯಕರು, ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ.
4. ಗುಲಬರ್ಗಾ ವಿಶ್ವವಿದ್ಯಾಲಯದ ಪರೀಕ್ಷಾ ವಿಭಾಗದ ಎಲ್ಲಾ ಶಾಖೆಗಳ ಅಧೀಕ್ಷಕರುಗಳು / ವಿಷಯ ನಿರ್ವಾಹಕರುಗಳಿಗೆ.
5. ಉಗ್ರಾಣ ಪಾಲಕರು, ಉಗ್ರಾಣ ಶಾಖೆ, ಪರೀಕ್ಷಾ ವಿಭಾಗ, ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ.
6. ಜಿಲ್ಲಾ ಸಮಾಜಕಲ್ಯಾಣ / ಹಿಂದುಳಿದ ವರ್ಗ&ಅಲ್ಪಸಂಖ್ಯಾತರ ಇಲಾಖೆಗಳಿಗೆ.
7. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಾಲೇಜು ಶಿಕ್ಷಣ ಇಲಾಖೆ, ಕಲಬುರಗಿ ವಿಭಾಗ.
8. ಗಣಕಯಂತ್ರ, ಪರೀಕ್ಷಾ ಶಾಖೆ, ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ ಇವರಿಗೆ ಈ ಅಧಿಸೂಚನೆಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.